# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು(ಗ್ರಾ) ಜಿಲ್ಲಾ ಪಂಚಾಯತ್‌ಗಳ ವ್ಯಾಪ್ತಿಯ ಖಾದಿ ಗ್ರಾಮೋದ್ಯೋಗ ಹಾಗೂ ತೋಟಗಾರಿಕೆ ಇಲಾಖೆಗಳ ಮತ್ತು ಆನೇಕಲ್ ಹಾಗೂ ದಾವಣಗೆರೆ ಜಿಲ್ಲೆಯ ತಾಲ್ಲೂಕು ಪಂಚಾಯತ್‌ಗಳ ವ್ಯಾಪ್ತಿಯ ಪಶು ಸಂಗೋಪನಾ ಇಲಾಖೆಯ ಪುನರ್ ರಚನೆಯಿಂದಾಗಿ ತೆರವಾಗಿದ್ದ ಅಧಿಕಾರಿ/ಸಿಬ್ಬಂದಿಯವರ ಹುದ್ದೆಗಳು ಭರ್ತಿಯಾದ್ದರಿಂದ ವೇತನ ವೆಚ್ಚಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ, ವೆಚ್ಚ 1 ಮತ್ತು 4 ಶಾಖೆಯ ಕಡತ ಸಂಖ್ಯೆ: ಆಇ 478 ವೆಚ್ಚ 1/2017, ಆಇ 18 ಮತ್ತು 33 ವೆಚ್ಚ 4/2018 ಮತ್ತು ಆಇ 801 ವೆಚ್ಚ 4/2017

**ಪ್ರಸ್ತಾವನೆ:**

ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಖಾದಿ ಗ್ರಾಮೋದ್ಯೋಗ ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆ ಭರ್ತಿಯಾದ್ದರಿಂದ ವೇತನ ವೆಚ್ಚಕ್ಕಾಗಿ ರೂ.5.12ಲಕ್ಷ ಅನುದಾನವನ್ನು ಲೆಕ್ಕ ಶೀರ್ಷಿಕೆ 2851-00-107-0-27-001ರಡಿ, ಬೆಂಗಳೂರು(ಗ್ರಾಮಾಂತರ) ಜಿಲ್ಲಾ ಪಂಚಾಯತ್ ವ್ಯಾಪ್ತಿಯ ತೋಟಗಾರಿಕೆ ಇಲಾಖೆಯ ಜೇನು ಕೃಷಿ ಕಛೇರಿಯಲ್ಲಿ ತೆರವಾಗಿದ್ದ 14 ವಿವಿಧ ಅಧಿಕಾರಿ/ಸಿಬ್ಬಂದಿ ಹುದ್ದೆಗಳು ಭರ್ತಿಯಾದ್ದರಿಂದ ವೇತನ ವೆಚ್ಚಕ್ಕಾಗಿ ಹಾಗೂ ದಿನಗೂಲಿ ಆಧಾರದ ಮೇಲೆ ಜೇನು ಕೃಷಿ ಸಹಾಯಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರಿಗೆ ಪರಿಷ್ಕೃತ ಬಾಕಿ ವೇತನ ಪಾವತಿಗಾಗಿ ರೂ.62.37ಲಕ್ಷ ಮತ್ತು ರೂ.1.00ಲಕ್ಷ ಒಟ್ಟು ರೂ.63.37ಲಕ್ಷ ಅನುದಾನವನ್ನು ಲೆಕ್ಕ ಶೀರ್ಷಿಕೆ 2851-00-107-0-33-001&050ರಡಿ ಮತ್ತು ಆನೇಕಲ್, ದಾವಣಗೆರೆ, ಚನ್ನಗಿರಿ, ಹರಪನಹಳ್ಳಿ, ಹರಿಹರ, ಹೊನ್ನಾಳಿ ಮತ್ತು ಜಗಳೂರು ತಾಲ್ಲೂಕು ಪಂಚಾಯತ್ ವ್ಯಾಪ್ತಿಯ ಪಶು ಸಂಗೋಪನೆ ಇಲಾಖೆಯ ಪುನರ್ ರಚನೆಯಿಂದ 52 ಹುದ್ದೆಗಳಡಿ ಅಧಿಕಾರಿ/ಸಿಬ್ಬಂದಿಯವರುಗಳು ಜಿಲ್ಲಾ ಪಂಚಾಯತ್ ಕಾರ್ಯಕ್ರಮದಿಂದ ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿ ಸೇರ್ಪಡೆಗೊಂಡಿದ್ದರಿಂದ ವೇತನ ವೆಚ್ಚಕ್ಕಾಗಿ ರೂ.519.81ಲಕ್ಷ ಅನುದಾನವನ್ನು ಲೆಕ್ಕ ಶೀರ್ಷಿಕೆ 2403-00-101-0-61-001ರಡಿ ಹೆಚ್ಚುವರಿ ಅನುದಾನವನ್ನು ಕೋರಿದ್ದು, ಕೋರಿರುವ ಹೆಚ್ಚುವರಿ ಅನುದಾನವನ್ನು ಲೆಕ್ಕ ಶೀರ್ಷಿಕೆ 2515-00-196-1-05-300 ಅಡಿ ಲಭ್ಯವಿರುವ ಅನುದಾನದಿಂದ ರೂ.68.49ಲಕ್ಷಗಳನ್ನು ಬಿಡುಗಡೆಗೊಳಿಸಲು ಹಾಗೂ ತಾಲ್ಲೂಕು ಪಂಚಾಯತ್‌ಗಳಿಗೆ ರೂ.519.81ಲಕ್ಷ ಹೆಚ್ಚುವರಿ ಅನುದಾನವನ್ನು ಕೋರಿದ್ದು, ಕೋರಿರುವ ಹೆಚ್ಚುವರಿ ಅನುದಾನವನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಲಾಗಿದೆ. ಅದರನ್ವಯ ಕೆಳಕಂಡಂತೆ ಆದೇಶಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 60 ವೆಚ್ಚ 6/2018 ದಿನಾಂಕ: 25ನೇ ಜನವರಿ 2018

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2 ಜಿಲ್ಲಾ ಪಂಚಾಯತ್‌ಗೆ ಕಾಲಂ 3ರ ಜಿಲ್ಲಾ/ತಾಲ್ಲೂಕು ಪಂಚಾಯತ್‌ಗಳಿಗೆ ಕಾಲಂ 3 ರಿಂದ 6ರ ಕಾರ್ಯಕ್ರಮದಡಿಯಲ್ಲಿ ಕಾಲಂ 7 ಮತ್ತು 8ರನ್ವಯ ಲೆಕ್ಕ ಶೀರ್ಷಿಕೆ 2515-00-196-1-05-300 ಮತ್ತು ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಕಾಲಂ 9ರಂತೆ ಒಟ್ಟು ಅನುದಾನ ರೂ.588.30ಲಕ್ಷ (ರೂಪಾಯಿ ಐದು ನೂರ ಎಂಬತ್ತೆಂಟು ಲಕ್ಷಗಳ ಮೂವತ್ತು ಸಾವಿರಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಲಾಗಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1)ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿದ ನಿರ್ದೇಶನದಂತೆ ಕ್ರಮವಹಿಸಿ ವೇತನ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ನ ಮುಖ್ಯ ಲೆಕ್ಕಾಧಿಕಾರಿಗಳು/ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರುರವರಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಸಲ್ಲಿಸಿ ಖಜಾನೆಯಲ್ಲಿ ಅಪ್‌ಲೋಡ್ ಮಾಡಿಕೊಳ್ಳುವುದು)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ),
ಆರ್ಥಿಕ ಇಲಾಖೆ

1. ಮಹಾಲೇಖಪಾಲರು (ಎ&ಇ), ಲೆಕ್ಕ ಪರಿಶೋಧನೆ 1&2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ವಾಣಿಜ್ಯ&ಕೈಗಾರಿಕೆ/ತೋಟಗಾರಿಕೆ/ಪಶು ಸಂಗೋಪನೆ ಇಲಾಖೆ
3. ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
4. ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
5. ಸಂಬಂಧಪಟ್ಟ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು
6. ಸಂಬಂಧಪಟ್ಟ ಜಿಲ್ಲಾ/ಉಪ ಖಜಾನೆ ಅಧಿಕಾರಿಗಳು
7. ಆರ್ಥಿಕ ಇಲಾಖೆ ವೆಚ್ಚ 5 ಶಾಖೆಯ ಕಡತಕ್ಕೆ
8. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ